## ಕರ್ನಾಟಕ ವಿಧಾನ ಪರಿಷತ್ತು

**ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಕಿಶೋರ್ ಕುಮಾರ್ ಪುತ್ತೂರು ಇವರು ಶೂನ್ಯ ವೇಳೆಯಲ್ಲಿ ಪ್ರಸ್ತಾಪಿಸಿರುವ ಸೂಚನೆಗೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರ ಉತ್ತರ.**

***

**ವಿಷಯ:-** ಹೊಸದಿಗಂತ ದಿನಪತ್ರಿಕೆಯಲ್ಲಿ ಕರಾವಳಿ ಭಾಗದಲ್ಲಿ ಸಾಮಾನ್ಯ ವ್ಯಕ್ತಿಗೆ ದಾಖಲೆ ಪತ್ರಗಳ ಸಿದ್ಧಪಡಿಸುವ ಸವಾಲು "ಮನೆ ಕಟ್ಟಿ ನೋಡು ಎನ್ನುವಂತಾಗಿದೆ ! ಎಂಬುದಾಗಿ ಪ್ರಕಟವಾಗಿರುವ ವರದಿಯ ವಿಷಯವನ್ನು ಸದನದಲ್ಲಿ ಪ್ರಸ್ತಾಪಿಸಲು ಅವಕಾಶ ನೀಡಬೇಕೆಂದು ಕೋರುತ್ತೇನೆ.

ರಾಜ್ಯದ ಕರಾವಳಿಯ ಗ್ರಾಮೀಣ ಭಾಗದಲ್ಲಿರುವ ಒಬ್ಬ ಸಾಮಾನ್ಯ ವ್ಯಕ್ತಿ ತನ್ನ ಸ್ವಂತ ಜಮೀನಿನಲ್ಲಿ ಹೊಸದಾಗಿ ಮನೆ ನಿರ್ಮಿಸಲು ಸರ್ಕಾರದ ವಿವಿಧ ಇಲಾಖೆಗಳಿಂದ ಅನುಮೋದನೆ ಪಡೆಯಬೇಕಾದ ಪ್ರಕ್ರಿಯೆಗಳು ಬಹಳ ಜಟಿಲವಾಗಿದ್ದು, ಯಾವುದೇ ಒಬ್ಬ ವ್ಯಕ್ತಿ ತಾನೇ ಸ್ವತಹ ಈ ಎಲ್ಲಾ ಪ್ರಕ್ರಿಯೆಗಳನ್ನು ಮಾಡಲು ಸಾಧ್ಯವಿಲ್ಲದ ಸನ್ನಿವೇಶ ನಿರ್ಮಾಣವಾಗಿದೆ. ಭೂ ಪರಿವರ್ತನೆಯಿಂದ ಪ್ರಾರಂಭಿಸಿ ವಿದ್ಯುತ್ ಸಂಪರ್ಕ ಪಡೆಯುವವರೆಗೆ ಪ್ರತಿಯೊಬ್ಬ ನಾಗರಿಕನೂ ಕನಿಷ್ಟ 06 ಇಲಾಖೆಗಳಿಗೆ ಅಲೆದಾಡಬೇಕಾದ ಪರಿಸ್ಥಿತಿ ನಿರ್ಮಾಣವಾಗಿದೆ.

ಇ ಎಲ್ಲಾ ಪ್ರಕ್ರಿಯೆಗಳನ್ನು ಸರಳಗೊಳಿಸಲು ಸಾಧ್ಯವಿದೆ. ಮಾನ್ಯ ಸರ್ಕಾರವು ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮದ ಪ್ರಕರಣ ಸಂಖ್ಯೆ 64(5) ತಿದ್ದುಪಡಿ ಮಾಡಿ ಗ್ರಾಮಾಂತರ ಯೋಜನಾ ನಿಯಮವನ್ನು ಜಾರಿಗೆ ತಂದು ನಿವೇಶನದ ವಿನ್ಯಾಸ ಅನುಮೋದನೆ ಅಧಿಕಾರವನ್ನು ಗ್ರಾಮ ಪಂಚಾಯತಿಗೆ ನೀಡಿದಲ್ಲಿ ಗ್ರಾಮೀಣ ಜನರು ನಗರ, ತಾಲೂಕು ಮತ್ತು ಜಿಲ್ಲಾ ಕೇಂದ್ರಗಳಿಗೆ ಅಲೆದಾಟ ತಪ್ಪುತ್ತದೆ. ಇಂತಹ ಜನಪರವಾದ ನಿಲುವನ್ನು ಸರ್ಕಾರ ಕೈಗೊಂಡಲ್ಲಿ ಪ್ರಜಾಪ್ರಭುತ್ವ ಮತ್ತು ಆಡಳಿತ ವಿಕೇಂದ್ರೀಕರಣ ವ್ಯವಸ್ಥೆಗೆ ಮೆರುಗು ಬರುತ್ತದೆ ಎಂಬುದರ ಬಗ್ಗೆ.

****

**ಉತ್ತರ:** ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಅಧಿನಿಯಮ, 1961 ರ ಪ್ರಕರಣ 17 ರಲ್ಲಿ ಯೋಜನಾ ಪ್ರದೇಶದ ವ್ಯಾಪ್ತಿಯೊಳಗೆ ಹಾಗೂ ಪ್ರಕರಣ 4ಕೆ ರಲ್ಲಿ ಸ್ಥಳೀಯ ಯೋಜನಾ ಪ್ರದೇಶದ ವ್ಯಾಪ್ತಿಯಿಂದ ಹೊರಗಿನ ಪ್ರದೇಶಗಳಲ್ಲಿ ಬಡಾವಣೆ ಅನುಮೋದನೆ ಹಾಗೂ ಕಟ್ಟಡ ನಿರ್ಮಾಣದ ಬಗ್ಗೆ ವಹಿಸಬೇಕಾದ ಕ್ರಮಗಳನ್ನು ತಿಳಿಸಲಾಗಿರುತ್ತದೆ.

ಸ್ಥಳೀಯ ಯೋಜನಾ ಪ್ರದೇಶ ವ್ಯಾಪ್ತಿಯ ಹೊರಗಿನ ಪ್ರದೇಶದಲ್ಲಿನ ಗ್ರಾಮ ಪಂಚಾಯಿತಿಗಳು ಕಟ್ಟಡ ನಿರ್ಮಾಣಕ್ಕೆ ಸಂಬಂಧಿಸಿದಂತೆ ಪರವಾನಿಗೆಗಳನ್ನು ನೀಡುವ ಬಗ್ಗೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಅಧಿನಿಯಮ, 1961 ರ ಪ್ರಕರಣ 4ಕೆ ಅನ್ವಯ ಮತ್ತು The Karnataka Town and Country Planning (Development of Land in areas other than Local Planning Areas) Regulations, 2025 ಕ್ರಮ ವಹಿಸಬೇಕಾಗಿರುತ್ತದೆ.

ಸದರಿ ವಿಷಯದ ಕುರಿತು ಸರ್ಕಾರದ ಗಮನಕ್ಕೆ ಇರುತ್ತದೆ. ಈ ವಿಷಯದ ಬಗ್ಗೆ ಇತರೆ ಸಂಬಂಧಪಟ್ಟ ಇಲಾಖೆಗಳ ಜೊತೆ ಚರ್ಚಿಸಿ ಸರಳೀಕರಣಗೊಳಿಸುವ ಬಗ್ಗೆ ಪರಿಶೀಲಿಸಲಾಗುವುದು.

ಸಂಖ್ಯೆ:RDPR 1087 GPA 2025

(ಪ್ರಿಯಾಂಕ್ ಖರ್ಗೆ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ
ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು